ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಲೇಔಟ್‌ಗಳ ಅನುಮತಿ ಕುರಿತು

ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-

203(255) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 03 ವರ್ಷಗಳಿಂದ ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಲೇಔಟ್‌ಗಳಿಗೆ ಅನುಮತಿ ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನಿಗಧಿತ ಅವಧಿಯಲ್ಲಿ ಲೇಔಟ್ ಅಭಿವೃದ್ಧಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಭಿವೃದ್ಧಿ ಮಾಡಿರುವ ಲೇಔಟ್‌ಗಳ ಸಂಖ್ಯೆ ಎಷ್ಟು ; ಮತ್ತು ಅಭಿವೃದ್ಧಿ ಮಾಡದಿರುವ ಲೇಔಟ್‌ಗಳ ವಿರುದ್ಧ ಕೈಗೊಂಡ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಲಬುರಗಿ ಜಿಲ್ಲೆಯಲ್ಲಿ ಅನಧಿಕೃತವಾಗಿ ನಿರ್ಮಾಣವಾಗಿರುವ ಲೇಔಟ್‌ಗಳ ಸಂಖ್ಯೆ ಎಷ್ಟು ; ಮತ್ತು ಸದರಿಯವರ ವಿರುದ್ಧ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)